ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಗ್ರಾಮ ಪಂಚಾಯತಿ ಮತ್ತು ಪ್ರಮುಖ ಪಟ್ಟಣ ಕೇಂದ್ರಗಳಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯುವ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು):-

136 (98) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮುಖ್ಯಮಂತ್ರಿಗಳು ಘೋಷಿಸಿದಂತೆ, 1000 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ರಾಜ್ಯದ ಹೋಬಳಿ ಕೇಂದ್ರದಲ್ಲಿ ಸ್ಥಾಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾ ಪ್ರವೇಶವನ್ನು ಶಿಶುವಿಹಾರದಿಂದ (Lower Kindergarten) ಪ್ರಾರಂಭಿಸಿ, 12ನೇ ತರಗತಿಯವರೆಗೆ ಶಾಲೆಗಳನ್ನು ನಡೆಸಲು ತೆರೆಯಲಾಗಿದೆಯೇ ; (ವಿವರ ನೀಡುವುದು)

(ಇ) ಸರ್ಕಾರ ಘೋಷಿಸಿದಂತೆ, ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮಗಳಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣವನ್ನು ಬೋಧಿಸಲಾಗುತ್ತಿದೆಯೇ; (ವಿವರ ನೀಡುವುದು)

(ಈ) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸಿರುವುದರಿಂದ, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಗ್ರಾಮ ಪಂಚಾಯತ್ ಕೇಂದ್ರಗಳಲ್ಲಿ ಮತ್ತು ಇತರೆ ಪ್ರಮುಖ ಪಟ್ಟಣಗಳಲ್ಲಿ ತೆರೆಯಲು ಹೊಂದಿರುವ ಯೋಜನೆಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)